## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s RBRK Investments Limited ಕಂಪನಿಗೆ ವಿಜಯಪುರ ಜಿಲ್ಲೆ, ಬಸವನಬಾಗೇವಾಡಿ ತಾಲ್ಲೂಕಿನ ಜೈನಾಪುರ ಮತ್ತು ಟಕ್ಕಲಕಿ ಗ್ರಾಮಗಳಲ್ಲಿ ಹಂಚಿಕೆಯಾಗಿದ್ದ 33 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 84 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಇಎನ್ 493 ಎನ್‌ಸಿಇ 2011 ದಿನಾಂಕ:08.11.2011.

2) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 234 ಎನ್‌ಸಿಇ 2005 ದಿನಾಂಕ:17.11.2015

3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KRED/08/RBRK-33 MW/2010 /779-R.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ M/s RBRK Investmetns Limited ಕಂಪನಿಗೆ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಜೈನಾಪುರ ಮತ್ತು ಟಕ್ಕಲಕಿ ಗ್ರಾಮಗಳಲ್ಲಿ 33 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು. ತದನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ತಿದ್ದುಪಡಿ ಆದೇಶದಲ್ಲಿ ಸದರಿ ಯೋಜನೆಯನ್ನು ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ :ಇಎನ್ 07 ಎನ್‌ಸಿಇ 2011 ದಿನಾಂಕ :18.07.2011 ರನ್ವಯ ಪವನ ವಿದ್ಯುತ್ ಯೋಜನೆಗೆ ನಿಗಧಿಪಡಿಸಿರುವ ಅವಧಿಯೊಳಗಾಗಿ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು ಎಂದು ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಏಕ ಕಡತ ಪದ್ಧತಿಯಡಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s RBRK Investmetns Limited ಕಂಪನಿಗೆ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಜೈನಾಪುರ ಮತ್ತು ಟಕ್ಕಲಕಿ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 33 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಪ್ರದೇಶದಲ್ಲಿಯೇ 84 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಬಹುದೆಂದು ಅಭಿವೃದ್ಧಿದಾರರು ವಿಸ್ತೃತ ಯೋಜನಾ ವರದಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಸಲ್ಲಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ, M/s RBRK Investmetns Limited ಕಂಪನಿಗೆ ಈಗಾಗಲೇ ಹಂಚಿಕೆಯಾಗಿರುವ 33 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳದಲ್ಲಿಯೇ 84 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ, ಸಾಮರ್ಥ್ಯವನ್ನು ಹೆಚ್ಚಳಗೊಳಿಸಬಹುದೆಂದು ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

---2)

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 249 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 16.11.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, ಸರ್ಕಾರದ ಆದೇಶ ಸಂಖ್ಯೆ : ಇಎನ್ 493 ಎನ್‌ಸಿಇ 2011, ದಿ:08.11.2011 ರಲ್ಲಿ M/s RBRK Investmetns Limited ಕಂಪನಿಗೆ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಜೈನಾಪುರ ಮತ್ತು ಟಕ್ಕಲಕಿ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 33 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 84 ಮೆ.ವ್ಯಾ. ಸಾಮರ್ಥ್ಯಕ್ಕೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹೆಚ್ಚಿಸಿ ಆದೇಶಿಸಲಾಗಿದೆ.

**Schedule**

**The Geographical area description for 84 MW capacity Wind power project of M/s RBRK Investmetns Limited**

| Geographical Area details | Near by villages of the proposed area & District | Sanctioned capacity in MW | Enhancement proposed in MW | Total capacity in MW |
|---|---|---|---|---|
| Two areas are proposed for establishment and are identified as Area I & II. Area I & II are located on the West and NE of Easavanabagewadi. Both the areas are ground level plain area and have no significant high raised features. It appears to be agriculture lands and is covered in the following Geographical Co-ordinates as per the GO issued for 33 MW vide No:En 493 NCE 2011 Dt:08.11.2011 & EN 234 NCE 2015 Dated:17.11.2015.<br><br>**Area I:**<br>Latitude:16°32'59"- 16°36'15'N<br>Longitude: 75°53'40''-75°57'42" E<br>Ridge peaks: 638 and 639 m Amsl<br>**Area II:**<br>Latitude:16°34'49"- 16°38'38'N<br>Longitude: 75°58'50''-76°0'0" E<br>Ridge peaks: 626 and 650m Amsl<br><br>Toposheet No. 47 P/14 | Basavanabagewadi, Jainapura and Takkalaki Villages in Basavanabagewadi Taluk, Bijapur District. | 33 MW | 51 MW | 84 MW (42 Nosx2000 kW) |

**ಷರತ್ತು ಮತ್ತು ನಿಬಂಧನೆಗಳು**

1 ಅಭಿವೃದ್ಧಿದಾರರು ಸರ್ಕಾರಿ ಆದೇಶ ಸಂಖ್ಯೆ: ಇಎನ್ 435 ಎನ್‌ಸಿಇ 2011 ದಿನಾಂಕ 06.01.2012 ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಅಭಿವೃದ್ಧಿದಾರರು ಸರ್ಕಾರದ ಆದೇಶ ಸಂಖ್ಯೆ : ಇಎನ್ 493 ಎನ್‌ಸಿಇ 2011 ದಿನಾಂಕ :08.11.2011 ರಲ್ಲಿ ಹಂಚಿಕೆ ಮಾಡಲಾಗಿದ್ದ 33 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ದಿನಾಂಕ:07.11.2017 ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು ಮತ್ತು ಅದೇ ರೀತಿ ಸಾಮರ್ಥ್ಯ ಹೆಚ್ಚಳಗೊಂಡ 51 ಮೆ.ವ್ಯಾ. ಸಾಮರ್ಥ್ಯವನ್ನು ಈ ಆದೇಶದ ದಿನಾಂಕದಿಂದ 3 ವರ್ಷಗಳೊಗಾಗಿ ಅನುಷ್ಠಾನಗೊಳಿಸತಕ್ಕದ್ದು.

--3)

3 ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಮತ್ತು ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಆಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.

4 ಅಭಿವೃದ್ಧಿದಾರರು ಯೋಜನೆಗೆ ಸಂಬಂಧಿಸಿದಂತೆ ನಿಯಮಾನುಸಾರ ಪಾವತಿಸಬೇಕಾಗಿರುವ ಎಲ್ಲಾ ತರಹದ ಶುಲ್ಕಗಳನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

5 ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

6 ಈ ಯೋಜನೆಗೆ ಸರ್ಕಾರದ ಕೈಗಾರಿಕಾ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಅನ್ವಯವಾಗುತ್ತವೆ.

7 ಈ ಆದೇಶವನ್ನು ರದ್ದುಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಉಳಿದಂತೆ, ಸರ್ಕಾರದ ಮೂಲ ಹಂಚಿಕೆ ಆದೇಶ ಸಂಖ್ಯೆ: ಇಎನ್ 493 ಎನ್‌ಸಿಇ 2011, ದಿ:08.11.2011 ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

16.11

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

**ಪ್ರತಿ:**

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು - 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು - 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.

8 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.

9 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ.
10 ಜಿಲ್ಲಾಧಿಕಾರಿ, ವಿಜಯಪುರ ಜಿಲ್ಲೆ, ವಿಜಯಪುರ.
11 ಉಪ ಅರಣ್ಯ ಸಂರಕ್ಷಣಾಧಿಕಾರಿ, ವಿಜಯಪುರ ಪ್ರಾದೇಶಿಕ ವಿಭಾಗ, ವಿಜಯಪುರ.
12 ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
13 M/s RBRK Investmetns Limited, 8-2-293/82/A/1110, Pol No. 1110, Road No.55, Jubilee Hills, Hyderabad-500 033.
14 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
15 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
16 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.